ಕರ್ನಾಟಕ ಸರ್ಕಾರ

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕು ಸುಟ್ಟಟ್ಟಿ ಗ್ರಾಮವನ್ನು ನೂತನ ಗ್ರಾಮ ಪಂಚಾಯತಿಯನ್ನಾಗಿ ರಚಿಸುವ ಬಗ್ಗೆ.

**ಓದಲಾಗಿದೆ:** ಬೆಳಗಾವಿ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ ಚುಶಾ/ಇಎಲ್‌ಎನ್/ಸಿಆರ್-102/2015-16 ದಿನಾಂಕ: 18.02.2016.

**ಪ್ರಸ್ತಾವನೆ :**

ಮೇಲೆ ಓದಲಾದ ಪತ್ರದಲ್ಲಿ ಬೆಳಗಾವಿ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ 15-ನಿಲಜಿ ಗ್ರಾಮ ಪಂಚಾಯತಿಯಿಂದ ಸುಟ್ಟಟ್ಟಿ ಗ್ರಾಮವನ್ನು ಬೇರ್ಪಡಿಸಿ, ಪ್ರತ್ಯೇಕವಾದ ಸುಟ್ಟಟ್ಟಿ ಗ್ರಾಮ ಪಂಚಾಯತಿಯನ್ನು ರಚಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. 2011 ರ ಜನಗಣತಿಯ ಪ್ರಕಾರ 15-ನಿಲಜಿ ಗ್ರಾಮ ಪಂಚಾಯತಿಯ ಒಟ್ಟು ಜನಸಂಖ್ಯೆ 6904, ಸುಟ್ಟಟ್ಟಿ ಗ್ರಾಮ ಪಂಚಾಯತಿಯ ಒಟ್ಟು ಜನಸಂಖ್ಯೆ 3906 ಆಗಿರುತ್ತದೆ.

15-ನಿಲಜಿ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಿಂದ ಸುಟ್ಟಟ್ಟಿ ಗ್ರಾಮವು ಸುಮಾರು 05 ಕಿ.ಮೀ. ದೂರವಿದ್ದು, ಸಾರ್ವಜನಿಕರು ಗ್ರಾಮ ಪಂಚಾಯತಿಯಲ್ಲಿ ತಮ್ಮ ಕೆಲಸ ಕಾರ್ಯಗಳಿಗೆ ಸಂಚರಿಸಲು ತುಂಬಾ ಕಷ್ಟ ಸಾಧ್ಯವಾಗುತ್ತಿರುವುದಾಗಿ ತಿಳಿಸಿದ್ದಾರೆ. ಸುಟ್ಟಟ್ಟಿ ಗ್ರಾಮದಲ್ಲಿ ಎಲ್ಲಾ ಮೂಲಸೌಲಭ್ಯವಿದ್ದು ಸಾರ್ವಜನಿಕ ಹಿತ ದೃಷ್ಟಿಯಿಂದ ಸಾರ್ವಜನಿಕರ ಅಭಿಪ್ರಾಯದ ಮೇರೆಗೆ, 15-ನಿಲಜಿ ಗ್ರಾಮ ಪಂಚಾಯತಿಯಿಂದ ಸುಟ್ಟಟ್ಟಿ ಗ್ರಾಮವನ್ನು ಬೇರ್ಪಡಿಸಿ ಪ್ರತ್ಯೇಕವಾದ ಸುಟ್ಟಟ್ಟಿ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಲು 15-ನಿಲಜಿ ಗ್ರಾಮ ಪಂಚಾಯತಿ ಠರಾವು ಮಾಡಿದೆ. ಕಾರ್ಯನಿರ್ವಾಹಕ ಅಧಿಕಾರಿ, ತಹಶೀಲ್ದಾರ, ರಾಯಭಾಗ ಹಾಗೂ ಸುಟ್ಟಟ್ಟಿ ಗ್ರಾಮಸ್ಥರು ಸುಟ್ಟಟ್ಟಿ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಲು ಕೋರಿರುವುದಾಗಿ ಬೆಳಗಾವಿ ಜಿಲ್ಲಾಧಿಕಾರಿಗಳು ತಮ್ಮ ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ.

ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸುಟ್ಟಟ್ಟಿ ಗ್ರಾಮ ಪಂಚಾಯತಿಯನ್ನು ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಕಾರಣಗಳಿಂದಾಗಿ ರಚಿಸಬೇಕಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು, ಜಿಲ್ಲಾಧಿಕಾರಿಗಳು ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಸುಟ್ಟಟ್ಟಿ ಗ್ರಾಮ ಪಂಚಾಯತಿಯನ್ನು ರಚಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 260 ಗ್ರಾಪಂಅ 2016,**
**ಬೆಂಗಳೂರು, ದಿನಾಂಕ: 20.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ 15-ನಿಲಜಿ ಗ್ರಾಮ ಪಂಚಾಯತಿಯಿಂದ ಸುಟ್ಟಟ್ಟಿ ಗ್ರಾಮವನ್ನು ಪ್ರತ್ಯೇಕಿಸಿ, ಸುಟ್ಟಟ್ಟಿ ಗ್ರಾಮ ಪಂಚಾಯತಿಯನ್ನು ಹೊಸದಾಗಿ ರಚಿಸಲು ಸರ್ಕಾರ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 374 ವೆಚ್ಚ-6/2016, ದಿನಾಂಕ: 11.11.2016 ರ ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಪ್ರಾದೇಶಿಕ ಆಯುಕ್ತರು, ಬೆಳಗಾವಿ.
3. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
5. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6)/ಯೋಜನಾ ಇಲಾಖೆ.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ.
12. ಪಂಚಾಯತಿ ಅಭಿವೃದ್ಧಿ ಅಧಿಕಾರಿ, 15-ನಿಲಜಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ.
13. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
14. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
15. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.